ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೧೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ: ೧೧ನೇ ಜುಲೈ, ೨೦೧೬**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೨. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೩. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೪. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೫. ವೈದ್ಯಕೀಯ ಶಿಕ್ಷಣ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೭. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು

---

## ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ

**ಶ್ರೀ ಪ್ರಾಣೇಶ್ ಎಂ. ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೪೧ (೨೧೦೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಜಿಲ್ಲಾಸ್ಪತ್ರೆಯಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು, ಇತರೆ ಸಿಬ್ಬಂದಿಗಳು, ಔಷಧಗಳು ಮತ್ತು ಇತರೆ ಮೂಲ ಸೌಕರ್ಯಗಳ ಕೊರತೆಯಿಂದ ಸಾರ್ವಜನಿಕರಿಗೆ ಸೂಕ್ತ ಚಿಕಿತ್ಸೆ ನೀಡಲು ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲಾಸ್ಪತ್ರೆಯಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರುಗಳ ಹಾಗೂ ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಆಸ್ಪತ್ರೆಯ ಬೇಡಿಕೆಗನುಗುಣವಾಗಿ ಕಾಲಕಾಲಕ್ಕೆ ಔಷಧಗಳನ್ನು ಪೂರೈಸಲಾಗುತ್ತಿದೆಯೇ ;

(ಈ) ಜಿಲ್ಲಾಸ್ಪತ್ರೆಯಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರುಗಳನ್ನು ಇತರೆ ಸಿಬ್ಬಂದಿಗಳನ್ನು ಯಾವಾಗ ಭರ್ತಿ ಮಾಡಲಾಗುವುದು ; ಆಸ್ಪತ್ರೆಗಳಿಗೆ ಅಗತ್ಯವಿರುವ ಮೂಲ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ಗಂಗಾಕಲ್ಯಾಣ ಯೋಜನೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)–**

೨೪೨ (೨೧೦೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ತುರುವೇಕೆರೆ ಕ್ಷೇತ್ರದಲ್ಲಿ ಗಂಗಾಕಲ್ಯಾಣ ಯೋಜನೆಯಡಿ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಬಂದಿರುವ ಅರ್ಜಿಗಳನ್ನು ಮಂಜೂರು ಮಾಡಲು ಸಮಯ ನಿಗಧಿ ಮಾಡಲಾಗಿದೆಯೇ ;

(ಇ) ಇಲ್ಲವಾದಲ್ಲಿ, ಯಾವಾಗ ಮಾಡಲಾಗುವುದು ; ಆಯ್ಕೆಯ ಮಾನದಂಡಗಳೇನು ? (ಸಂಪೂರ್ಣ ವಿವರ ನೀಡುವುದು)

## ಸಾಂಸ್ಕೃತಿಕ ಭವನ, ರಂಗಮಂದಿರಗಳಿಗೆ ಅನುದಾನದ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)–**

೨೪೩ (೧೯೧೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ರಂಗಮಂದಿರ, ಸಾಂಸ್ಕೃತಿಕ ಭವನ ನಿರ್ಮಾಣಕ್ಕಾಗಿ ವೆಚ್ಚ ಮಾಡಿರುವ ಮೊತ್ತವೆಷ್ಟು ; (ಜಿಲ್ಲಾವಾರು, ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಾದ್ಯಂತ ಎಷ್ಟು ರಂಗಮಂದಿರ, ಸಾಂಸ್ಕೃತಿಕ ಭವನಗಳನ್ನು ನಿರ್ಮಿಸಲು ಅನುದಾನ ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ರಂಗಮಂದಿರ, ಸಾಂಸ್ಕೃತಿಕ ಭವನಗಳನ್ನು ಸ್ಥಾಪಿಸಲು ಅನುದಾನ ನೀಡಲು ಇರುವ ಮಾನದಂಡಗಳೇನು ;

(ಈ) ೨೦೧೬–೧೭ನೇ ಸಾಲಿನಲ್ಲಿ ಸಾಂಸ್ಕೃತಿಕ ಭವನ, ರಂಗಮಂದಿರ ಸ್ಥಾಪಿಸಲು ಮೀಸಲಿಟ್ಟಿರುವ ಮೊತ್ತವೆಷ್ಟು ?

## ಡಯಾಲಿಸಿಸ್ ಯಂತ್ರವನ್ನು ಅಳವಡಿಸುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೪೪ (೨೦೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಯಂತ್ರವನ್ನು ಅಳವಡಿಸಲಾಗಿದೆಯೇ ;

(ಆ) ಅಳವಡಿಸದಿದ್ದರೆ, ಸರ್ಕಾರದ ಮುಂದಿನ ಕ್ರಮವೇನು ?

## ರಾಯಚೂರು ಜಿಲ್ಲೆಗೆ ವಿವಿಧ ಇಲಾಖೆಗಳಿಂದ ನೀಡಿರುವ ಅನುದಾನ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೨೪೫ (೪೯೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂಜುಂಡಪ್ಪ ವರದಿ ಆಧಾರವಾಗಿ ಕಳೆದ ಎಂಟು ವರ್ಷಗಳಲ್ಲಿ ರಾಯಚೂರು ಜಿಲ್ಲೆಗೆ ವಿವಿಧ ಇಲಾಖೆಗಳ ಮುಖಾಂತರ ಇಲಾಖಾವಾರು ಅನುದಾನ ನೀಡಿರುವ ಬಗ್ಗೆ ವಿವರ ನೀಡುವುದು ;

(ಆ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ನಂಜುಂಡಪ್ಪ ವರದಿಯನ್ನು ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; ಯೋಜನೆಗಳನ್ನು ಅನುಷ್ಠಾನಗೊಳಿಸಲು ನಿಗಧಿಪಡಿಸಿರುವ ಅನುದಾನ ಎಷ್ಟು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ದಂತ ಪ್ರಯೋಗಾಲಯಗಳನ್ನು ಸ್ಥಾಪಿಸುವುದು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೪೬ (೨೧೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ ಆಸ್ಪತ್ರೆಗಳಲ್ಲಿ ದಂತ ಪ್ರಯೋಗಾಲಯಗಳು ಇಲ್ಲದೇ ಇರುವುದರಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ದಂತ ವೈದ್ಯರುಗಳು ರೋಗಿಗಳಿಗೆ ಅತ್ಯುತ್ತಮವಾದ ಚಿಕಿತ್ಸೆ ನೀಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಯಾವ ಯಾವ ಜಿಲ್ಲಾ ಆಸ್ಪತ್ರೆಗಳು ದಂತ ಪ್ರಯೋಗಾಲಯಗಳನ್ನು ಹೊಂದಿವೆ ; ಎಷ್ಟು ಜಿಲ್ಲಾ ಆಸ್ಪತ್ರೆಗಳು ದಂತ ಪ್ರಯೋಗಾಲಯಗಳನ್ನು ಹೊಂದಿರುವುದಿಲ್ಲ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಾಗಾದರೆ, ದಂತ ಪ್ರಯೋಗಾಲಯಗಳನ್ನು ಹೊಂದದೇ ಇರುವ ಆಸ್ಪತ್ರೆಗಳಲ್ಲಿ ದಂತ ಪ್ರಯೋಗಾಲಯಗಳನ್ನು ಕೂಡಲೇ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಇದು ಯಾವಾಗಿನಿಂದ ಜಾರಿಗೆ ಬರುವುದು ? (ವಿವರವಾದ ಮಾಹಿತಿ ನೀಡುವುದು)

## ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಯರ ಭದ್ರತೆ ಕುರಿತು

**ಶ್ರೀಮತಿ ತಾರಾಅನುರಾಧ (ನಾಮನಿರ್ದೇಶನ ಹೊಂದಿದವರು)–**

೨೪೭ (೨೦೭೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹೆಣ್ಣು ಮಕ್ಕಳ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಯರ ಆರೋಗ್ಯ ದೃಷ್ಟಿಯಿಂದ ರಾತ್ರಿ ಸಮಯದಲ್ಲಿ ಕಾರ್ಯನಿರ್ವಹಿಸಲು ಹಾಸ್ಟೆಲ್‌ಗಳಲ್ಲಿ ನರ್ಸ್‌ಗಳನ್ನು ನೇಮಕ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಇಲ್ಲವಾದಲ್ಲಿ, ಕ್ರಮ ಕೈಗೊಳ್ಳುವುದೇ ;

(ಆ) ವಿದ್ಯಾರ್ಥಿನಿಯರ ನಿಲಯಕ್ಕೆ ಭದ್ರತೆಗಾಗಿ ಗುತ್ತಿಗೆ ಆಧಾರದಲ್ಲಿ ಒಬ್ಬರು ಭದ್ರತಾ ಸಿಬ್ಬಂದಿಯನ್ನು ಅಥವಾ ಸಂಬಂಧಪಟ್ಟ ಪೊಲೀಸ್ ಠಾಣೆಯ ಸಿಬ್ಬಂದಿಯನ್ನು ರಾತ್ರಿ ಪಾಳಿಯಲ್ಲಿ ಕಾರ್ಯನಿರ್ವಹಿಸಲು ನೇಮಕ ಮಾಡಲಾಗಿದೆಯೇ ;

(ಇ) ಭದ್ರತಾ ಲೋಪದಿಂದಾಗಿ ಆಗಿರುವಂತಹ ಘಟನೆಗಳು ನಡೆದಿರುವುದು ವರದಿಯಾಗಿದೆಯೇ ; ಎಷ್ಟು ಪ್ರಕರಣಗಳು ವರದಿಯಾಗಿವೆ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ವಿದ್ಯಾರ್ಥಿನಿಲಯಗಳಲ್ಲಿ ಹೆಣ್ಣು ಮಕ್ಕಳ ಭದ್ರತೆ ವಿಚಾರವಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ತುಮಕೂರು ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೪೮ (೨೧೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ/ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕೇಂದ್ರಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಮಂಜೂರಾದ ಹುದ್ದೆಗಳಲ್ಲಿ ಕೆಲಸ ಮಾಡುತ್ತಿರುವವರ ಸಂಖ್ಯೆ ಎಷ್ಟು ; ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಎಲ್ಲಾ ಹುದ್ದೆಗಳು ಸೇರಿದಂತೆ ತಾಲ್ಲೂಕುವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಎಷ್ಟು ದಿವಸಗಳಲ್ಲಿ ಭರ್ತಿ ಮಾಡಲು ಸರ್ಕಾರ ಕ್ರಮವಹಿಸಲಾಗುವುದು ;

(ಈ) ಗ್ರಾಮಾಂತರ ಆಸ್ಪತ್ರೆಗಳಲ್ಲಿ ತತ್‌ಕ್ಷಣಕ್ಕೆ ಬೇಕಾಗಿರುವ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ವಿಶೇಷ ಆದ್ಯತೆ ಮೇರೆಗೆ ಭರ್ತಿ ಮಾಡಲು ಸರ್ಕಾರ ಮುಂದಾಗುವುದೇ ;

(ಉ) ಹಳ್ಳಿಗಳ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಣ್ಣಪುಟ್ಟ ವೈದ್ಯಕೀಯ ಪರೀಕ್ಷೆ ಮಾಡುವ ಯಾವುದೇ ಸಲಕರಣೆ ಲ್ಯಾಬ್ ಇಲ್ಲದೇ ಇರುವುದರಿಂದ ರಕ್ತ/ಶುಗರ್/ಇ.ಸಿ.ಜಿ. (ಇಂತಹ ವೈದ್ಯಕೀಯ ಪರೀಕ್ಷೆ ಸಲಕರಣೆ ಮತ್ತು ಲ್ಯಾಬ್‌ಗಳನ್ನು ಕನಿಷ್ಟ ಪಕ್ಷ ಹೋಬಳಿ ಮಟ್ಟದಲ್ಲಿ ಅಥವಾ ಮಂಡಲ ಕೇಂದ್ರದಂತಹ ಆಸ್ಪತ್ರೆಗಳಲ್ಲಿ ತೆರೆಯಲಾಗುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿನ ಮಹಿಳಾ ಸಂಘ, ಸ್ತ್ರೀಶಕ್ತಿ ಸಂಘಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)–**

೨೪೯ (೨೧೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸ್ತ್ರೀಶಕ್ತಿ ಸಂಘ, ಮಹಿಳಾ ಸಂಘಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡ ಹೊಂದಿರುವ ಸಂಘಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿನ ಸ್ತ್ರೀಶಕ್ತಿ ಸಂಘ, ಮಹಿಳಾ ಸಂಘಗಳು ಚಟುವಟಿಕೆ ನಡೆಸುತ್ತಿದ್ದು, ತಮ್ಮ ವಾರದ ಸಭೆ ನಡೆಸುವುದಕ್ಕೆ ಸರಿಯಾದ ಸ್ಥಳಾವಕಾಶವಿಲ್ಲದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಗತ್ಯ ಕಟ್ಟಡ ನಿರ್ಮಿಸಲು ಸರ್ಕಾರದ ಯೋಜನೆ ಏನು ; ಯಾವ ಕಾಲ ಪರಿಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ಸರ್ಕಾರಿ ಶಾಲೆಗಳಲ್ಲಿ ಸಮಯ ಹೊಂದಾಣಿಕೆ ಮಾಡಿಕೊಂಡು ಮಹಿಳೆಯರು ತಮ್ಮ ಸಂಘದ ಚಟುವಟಿಕೆ ನಡೆಸಲು ಅನುವು ಮಾಡಿಕೊಡಲು ಸರ್ಕಾರ ಗಮನಿಸಿ ತಾತ್ಕಾಲಿಕವಾಗಿ ವ್ಯವಸ್ಥೆ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ ?

## ಕೊಡಗು ಜಿಲ್ಲೆಯ ಕುಡಿಯ ಬುಡಕಟ್ಟು ಜನಾಂಗದವರಿಗೆ ವಿಶೇಷ ಅನುದಾನ ನೀಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ. ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೫೦ (೧೯೦೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬುಡಕಟ್ಟು ಜನಾಂಗದವರಲ್ಲಿ ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ ಪಂಗಡಗಳಾದ ಸಿದ್ದಿ, ಮಲೈಕುಡಿ, ಸೋಲಿಗ, ಎರವ ಮತ್ತು ಡೋಂಗ್ರಿಗರೇಶಿಯಾ ಜನಾಂಗದವರು ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಸಂಖ್ಯೆಯಲ್ಲಿ ವಾಸಿಸುತ್ತಿದ್ದಾರೆ ;

(ಆ) ಸದರಿ ಬುಡಕಟ್ಟು ಜನಾಂಗದವರು ಕೊಡಗು ಜಿಲ್ಲೆಯಲ್ಲಿ ಎಷ್ಟು ಜನಸಂಖ್ಯೆಯಲ್ಲಿದ್ದಾರೆ ;

(ಇ) ಕೊಡಗು ಜಿಲ್ಲೆಯಲ್ಲಿ ಹೆಚ್ಚಾಗಿ ವಾಸಿಸುತ್ತಿರುವ ಕುಡಿಯ ಜನಾಂಗದವರು ಬುಡಕಟ್ಟು ಜನಾಂಗದವರಾಗಿದ್ದು, ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ ಪಂಗಡಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸಮಾಜ ಕಲ್ಯಾಣ ಇಲಾಖೆಯಿಂದ ಪ್ರತಿ ಸಾಲಿನಲ್ಲಿ ಬಿಡುಗಡೆಯಾಗಿರುವ ವಿಶೇಷ ಅಭಿವೃದ್ಧಿ ಯೋಜನೆಯಡಿ ಮೂಲಭೂತ ಸೌಕರ್ಯ ಒದಗಿಸಲು ಅನುದಾನ ಬಿಡುಗಡೆ ಮಾಡುವಾಗ ಕೊಡಗಿನ ಕುಡಿಯ ಜನಾಂಗದವರಿಗೆ ಸೌಲಭ್ಯ ನೀಡಲು ಅವಕಾಶವನ್ನು ಯಾಕೆ ಕಲ್ಪಿಸಿರುವುದಿಲ್ಲ ;

(ಉ) ಕೊಡಗು ಜಿಲ್ಲೆಯಲ್ಲಿ ಕುಡಿಯ ಜನಾಂಗದವರು ಎಷ್ಟು ಪ್ರಮಾಣದಲ್ಲಿದ್ದಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಊ) ಕೊಡಗು ಜಿಲ್ಲೆಯಲ್ಲಿ ಕುಡಿಯ ಜನಾಂಗದವರಿಗೆ ಮೂಲಭೂತ ಸೌಕರ್ಯ ಒದಗಿಸಲು ಯಾವ ಯೋಜನೆ ರೂಪಿಸಲಾಗಿದೆ ?

## ರಾಜ್ಯದಲ್ಲಿ ಅಪೌಷ್ಟಿಕ ಆಹಾರದಿಂದ ಬಳಲುತ್ತಿರುವ ಮಕ್ಕಳ ಬಗ್ಗೆ

**ಶ್ರೀ ಸೋಮಣ್ಣ .ಎಂ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೨೫೧ (೨೦೭೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಪೌಷ್ಠಿಕ ಆಹಾರದಿಂದ ಮಕ್ಕಳು ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಆ ಮಕ್ಕಳುಗಳ ಸಂಖ್ಯೆ ಎಷ್ಟು , ಮತ್ತು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಹಾವೇರಿ ಜಿಲ್ಲೆಯಲ್ಲಿ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿ ಸಿಂಧುತ್ವ ಪ್ರಮಾಣ ಪತ್ರ ನೀಡದೇ ಇರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೨೫೨ (೧೮೮೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಿಂದ ೨೦೧೬ ಜೂನ್ ಅಂತ್ಯದವರೆಗೆ ಹೈದ್ರಾಬಾದ್–ಕರ್ನಾಟಕ ಪ್ರದೇಶದ ಜಿಲ್ಲೆಯ ಅಭ್ಯರ್ಥಿಗಳಿಗೆ ''ಜಾತಿ ಸಿಂಧುತ್ವ ಪ್ರಮಾಣ ಪತ್ರ'' ನೀಡುವಲ್ಲಿ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡವುದು)

(ಆ) ಹಾಗಿದ್ದಲ್ಲಿ, ಅಭ್ಯರ್ಥಿಗಳಿಗೆ ಕೂಡಲೇ ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುವುದಕ್ಕೆ ಸರ್ಕಾರವು ಕೈಗೊಂಡಿರುವ ಕ್ರಮವೇನು ; (ಸ್ಪಷ್ಟ ಮಾಹಿತಿ ಒದಗಿಸುವುದು)

(ಇ) ಈ ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿಳಂಬ ಮಾಡುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕೂಡಲೇ ಸರ್ಕಾರವು ಯಾವ ಕ್ರಮ ಕೈಗೊಳ್ಳುವುದು ; (ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಆಯಾಯ ಜಿಲ್ಲಾ ಅಧಿಕಾರಿಯವರಿಗೆ ಸಿಂಧುತ್ವ ಪ್ರಮಾಣ ಪತ್ರ ನೀಡುವಂತೆ ಕೋರಿ ಬಂದ ಅರ್ಜಿಗಳೆಷ್ಟು ; ಹಾಗೆ ವಿಲೇಗೊಳಿಸಲಾದ ಹಾಗೂ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು, ವರ್ಷವಾರು ಪೂರ್ಣ ಮಾಹಿತಿ ನೀಡುವುದು)

## ವಸತಿ ಪ್ರೌಢಶಾಲಾ ಶಿಕ್ಷಕರಿಗೆ ನೇಮಕಾತಿ ಆದೇಶ ನೀಡುವ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)–**

೨೫೩ (೨೦೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨ನೇ ಇಸ್ವಿಯಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯ ನೀಡಿದ ತೀರ್ಪಿನಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಕೃಪಾಂಕ ನೀಡಿ ಅರ್ಹ ಅಭ್ಯರ್ಥಿಗಳೆಂದು ಸಿದ್ಧಪಡಿಸಿರುವ ಸುಮಾರು ೧೭೨ ಶಿಕ್ಷಕರಿಗೆ ನೇಮಕಾತಿ ಆದೇಶ ನೀಡುವಲ್ಲಿ ವಿಳಂಬ ಆಗಿರುವುದು ನಿಜವೇ ; ಹಾಗಿದ್ದಲ್ಲಿ ವಿಳಂಬವಾಗಲು ಕಾರಣಗಳೇನು ; (ವಿವರ ನೀಡುವುದು)

(ಆ) ಕೃಪಾಂಕ ನೀಡಿ ಸಿದ್ಧಪಡಿಸಿದ ಅರ್ಹತಾ ಅಭ್ಯರ್ಥಿಗಳ ಮೂಲ ದಾಖಲೆಗಳ ತಪಾಸಣೆ ಮಾಡುವ ಮತ್ತು ಅಂತಹ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆದುಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕಗಳಂದು ಈ ಕಾರ್ಯವನ್ನು ಪೂರ್ತಿಗೊಳಿಸಲಾಗುವುದು ?

## ಶಿವಮೊಗ್ಗ ಜಿಲ್ಲೆಯಲ್ಲಿ ನ್ಯಾಯಬೆಲೆ ಅಂಗಡಿಗಳ ಮತ್ತು ಪಡಿತರ ಚೀಟಿ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೫೪ (೨೧೧೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ನೀಡಿರುವ ನ್ಯಾಯ ಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; ಒಂದು ನ್ಯಾಯ ಬೆಲೆ ಅಂಗಡಿಗೆ ಎಷ್ಟು ಪಡಿತರ ಚೀಟಿಗಳನ್ನು ನಿಗಧಿ ಮಾಡಲಾಗಿದೆ.

(ಆ) ಶಿವಮೊಗ್ಗ ನಗರದ ಪಡಿತರ ಪ್ರದೇಶದಲ್ಲಿ ಪ್ರತಿ ನ್ಯಾಯ ಬೆಲೆ ಅಂಗಡಿಯಿಂದ ಎಷ್ಟು ಬೋಗಸ್ ಕಾರ್ಡ್‌ಗಳನ್ನು ಗುರುತಿಸಲಾಗಿದೆ ; (ಅಂಗಡಿವಾರು ಪಟ್ಟಿ ನೀಡುವುದು)

(ಇ) ರಾಜ್ಯದಲ್ಲಿ ಪಡಿತರ ಪ್ರದೇಶದಲ್ಲಿ ಸೀಮೆಎಣ್ಣೆ ಪಡೆಯಲು ಕೂಪನ್ ಮಾದರಿಯನ್ನು ಜಾರಿಗೆ ತಂದಿರುವುದರಿಂದ ನಿಗಧಿ ಮಾಡಿರುವ ಕೇಂದ್ರಗಳಿಗೆ ವಯಸ್ಸಾದ ಹಾಗೂ ಅನಾರೋಗ್ಯಕ್ಕೆ ಒಳಗಾದ ಪಡಿತರ ಚೀಟಿದಾರರಿಗೆ ಕೂಪನ್ ಪಡೆಯಲು ಆಗುತ್ತಿರುವ ಅನಾನುಕೂಲದ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಈ) ಶಿವಮೊಗ್ಗ ಜಿಲ್ಲೆ, ಹೊನ್ನಾಳಿ, ಚನ್ನಗಿರಿ ತಾಲ್ಲೂಕುಗಳಲ್ಲಿ ಪಡಿತರ ಚೀಟಿ ಬಯಸಿ ಎಷ್ಟು ಕುಟುಂಬಗಳು ಅರ್ಜಿ ಸಲ್ಲಿಸಿದ್ದಾರೆ ; ಅದರ ಬಗ್ಗೆ ತೆಗೆದುಕೊಂಡ ಕ್ರಮಗಳೇನು ?

## ಕೇಂದ್ರ ಯೋಜನಾ ಆಯೋಗದ ನಿರ್ದೇಶನದಂತೆ ಎಸ್.ಸಿ.ಪಿ. ಹಣ ಬಳಕೆ ಬಗ್ಗೆ

**ಶ್ರೀ ಡಿ. ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)–**

೨೫೫ (೧೯೧೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಯೋಜನಾ ಆಯೋಗದ ನಿರ್ದೇಶನದಂತೆ ಎಸ್‌ಸಿಪಿ/ಟಿಎಸ್‌ಪಿಗೆ ಮೀಸಲಿಡುವ ಹಣ ಆಯಾ ವರ್ಷದಲ್ಲೇ ಖರ್ಚಾಗಬೇಕು ; ಹಾಗೂ ಖರ್ಚಾಗದೆ ಬಾಕಿ ಉಳಿಯಬಾರದು ಮತ್ತು ಈ ಹಣವನ್ನು ಬೇರೆ ಬಾಬ್ತಿಗೆ ವರ್ಗಾಯಿಸಬಾರದು ಹಾಗೂ ಈ ಹಣವನ್ನು ಮಂಜೂರು ಮಾಡಬಾರದು ಎಂಬ ನಿರ್ಬಂಧ ನೀಡಿದೆಯೇ ;

(ಆ) ಹಾಗಿದ್ದಲ್ಲಿ, ಖರ್ಚಾಗದೆ ಉಳಿದಿರಲು ಕಾರಣಗಳೇನು ;

(ಇ) ಹಣ ಖರ್ಚು ಮಾಡದೆ ಉಳಿಸಿರುವ ಇಲಾಖೆಯ ಅಧಿಕಾರಿಗಳಿಗೆ ೨೦೧೩ ಎಸ್‌ಸಿಪಿ/ಟಿಎಸ್‌ಪಿ ಕಾಯ್ದೆಯಂತೆ ಯಾವ ಶಿಕ್ಷೆ ನೀಡಲಾಗುವುದು ?

**ಶ್ರೀನಿವಾಸ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 292 – ಪಿ8 – 1500 ಪ್ರತಿಗಳು